ಕರ್ನಾಟಕ ಸರ್ಕಾರ

ಕ್ರಮಾಂಕ: ಇಡಿ 205 ಯುಬಿವಿ 2010

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:21-10-2010.

ಇಂದ
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಉನ್ನತ ಶಿಕ್ಷಣ),
ಶಿಕ್ಷಣ ಇಲಾಖೆ,
ಬೆಂಗಳೂರು - 560 001.

ಇವರಿಗೆ
ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು-560 056.

ಮಾನ್ಯರೆ,

ವಿಷಯ:- **2010-11ನೇ ಶೈಕ್ಷಣಿಕ ಸಾಲಿಗೆ ಬೆಂಗಳೂರಿನ ಕೃಪಾನಿಧಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನ ಹೊಸ ಕೋರ್ಸುಗಳಿಗೆ ಸಂಯೋಜನೆ ನೀಡುವ ಬಗ್ಗೆ.**

ಉಲ್ಲೇಖ:- ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ ಇವರ ಪತ್ರ ಸಂ. ಎಸಿಎ-3/ಸಪಸ ಹೊಕಾಪ್ರ/ಹೊಕೋಪ್ರ/2009-10, ದಿನಾಂಕ:13-06-2009.

---

ಬೆಂಗಳೂರಿನ ಕೃಪಾನಿಧಿ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್ಸ್‌ನಲ್ಲಿ 2010-11ನೇ ಶೈಕ್ಷಣಿಕ ಸಾಲಿನಿಂದ ಹೊಸದಾಗಿ ಎಂ.ಬಿ.ಎ., ಮತ್ತು ಎಂ.ಸಿ.ಎ ಕೋರ್ಸುಗಳನ್ನು ಪ್ರಾರಂಭಿಸಲು ಸಂಯೋಜನೆ ಕೋರಿ ಬೆಂಗಳೂರು ವಿಶ್ವವಿದ್ಯಾಲಯಕ್ಕೆ ಸಲ್ಲಿಸಿದ ಅರ್ಜಿಯನ್ನು, ಬೆಂಗಳೂರು ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿ ಮತ್ತು ವಿದ್ಯಾವಿಷಯಕ ಪರಿಷತ್‌ನ ಸಮಾಲೋಚನೆಯೊಂದಿಗೆ ಸಿಂಡಿಕೇಟ್ ಮಾಡಿರುವ ಶಿಫಾರಸ್ಸನ್ನು ಆಧರಿಸಿ ಸಂವೀಕ್ಷಿಸಲಾಗಿದೆ.

2) ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ (11)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ಮೇಲ್ಕಂಡ ಕಾಲೇಜಿನಲ್ಲಿ ಎಂ.ಬಿ.ಎ., ಮತ್ತು ಎಂ.ಸಿ.ಎ ಕೋರ್ಸುಗಳನ್ನು ಕೆಳಗೆ ನಿಗದಿಪಡಿಸಿರುವ ವಿಷಯ ಸಮೂಹ ಮತ್ತು ವಿದ್ಯಾರ್ಥಿ ಪ್ರಮಾಣದೊಂದಿಗೆ **2010-11ನೇ** ಶೈಕ್ಷಣಿಕ ಸಾಲಿನಿಂದ ಪ್ರಾರಂಭಿಸಲು ಸಂಯೋಜನೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಮಂಜೂರು ಮಾಡುವಂತೆ ಸರ್ಕಾರದ ಶಿಫಾರಸ್ಸನ್ನು ತಿಳಿಸಲು ನಾನು ನಿರ್ದೇಶಿತನಾಗಿದ್ದೇನೆ.

| ಕ್ರ.ಸಂ. | ಕೋರ್ಸು | ವಿಷಯ ಸಮೂಹ/ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|---|
| 1 | ಎಂ.ಬಿ.ಎ., | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 120 (ನೂರ ಇಪ್ಪತ್ತು) |
| 2 | ಎಂ.ಸಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60 (ಅರವತ್ತು) |

ಷರತ್ತುಗಳು:-

1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸುಗಳಿಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು;
2) ಮೇಲ್ಕಂಡ ಕಾಲೇಜು ವಿಶ್ವವಿದ್ಯಾಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು;
3) ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ;
4) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;

....2

5) ಸ್ಥಳೀಯ ವಿಚಾರಣಾ ಸಮಿತಿ ಮತ್ತು ಎಐಸಿಟಿಇಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

6) ಕಾಲೇಜು/ಆಡಳಿತ ಮಂಡಳಿಯು ಶೇ.50 ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗದಿಪಡಿಸುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾಲಯವು ನಿಗದಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.

7) ದಿನಾಂಕ: 13-8-1997 ರಂದು ವಿಶಾಖ ತ/ ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟು ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ/ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable Offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ/ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು; ಮತ್ತು ಆ ವ್ಯಕ್ತಿ/ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು/ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು;

8) ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಉತ್ತಮ ಕೋರ್ಸನ್ನು ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು/ಆಡಳಿತ ಮಂಡಲಿಯು ವಿದ್ಯಾರ್ಥಿ/ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.

9) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯ ಅಂಕಪಟ್ಟ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ ಮೀರಿ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ;

10) ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರ ಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ, ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ/ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.

11) ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲೂ ಪಡೆಯತಕ್ಕದ್ದಲ್ಲ.

12) ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

13) ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

ತಮ್ಮ ನಂಬುಗೆಯ,

21/10

(ಯು.ಬಿ. ಉಳವಿ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು).

ಪ್ರತಿ:-

1) ಕಾಲೇಜು ಶಿಕ್ಷಣ ಆಯುಕ್ತರು/ನಿರ್ದೇಶಕರು, ಬೆಂಗಳೂರು - 560 001.
2) ಕಾಲೇಜು ಶಿಕ್ಷಣ ಪ್ರಾದೇಶಿಕ ಜಂಟಿ ನಿರ್ದೇಶಕರು, ಬೆಂಗಳೂರು.
3) ಪ್ರಾಂಶುಪಾಲರು, ಕೃಪಾನಿಧಿ ಗ್ರೂಪ್ ಆಫ್ ಇನ್ಸ್ಟಿಟ್ಯೂಷನ್ಸ್, # 12/1, ಕಾರ್ಮೆಲರಾಂ ರಸ್ತೆ, ಚಿಕ್ಕಬೆಳಂದೂರ್, ಬೆಂಗಳೂರು -560 035.